**All India Radio: Bangalore**
**National Bulletin In Kannada**
**04.02.2025  13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**04.02.2025  13.10 p.m.**
**<><><><>**

ಮುಖ್ಯಾಂಶಗಳು

- ರಾಷ್ಟ್ರಪತಿ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಗೆ ಇಂದು ಸಂಜೆ ಪ್ರಧಾನಿ ಉತ್ತರ
- ೨೦೩೧-೩೨ರ ವೇಳೆಗೆ ಭಾರತದ ಸ್ಥಾಪಿತ ವಿದ್ಯುತ್ ಉತ್ಪಾದನಾ ಸಾಮರ್ಥ್ಯ ೮೭೪ ಗಿಗಾ ವ್ಯಾಟ್‌ಗೆ ಹೆಚ್ಚಿಸಲು ಕ್ರಮ
- ತೆಂಗಿನಕಾಯಿ ಉತ್ಪಾದನೆಯಲ್ಲಿ ಭಾರತ ವಿಶ್ವದಲ್ಲೇ ಅಗ್ರ ರಾಷ್ಟ್ರ; ತೆಂಗಿನಕಾಯಿಗೆ ಬಾಧಿಸುವ ರೋಗಗಳಿಗೆ ಸರ್ಕಾರದಿಂದ ಕ್ರಮ
- ವಿಶ್ವಸಂಸ್ಥೆಯ ಬಜೆಟ್‌ಗೆ ಭಾರತದಿಂದ ೩೭.೬೪ ಮಿಲಿಯನ್ ಅಮೆರಿಕಾ ಡಾಲರ್ ಕೊಡುಗೆ; ಪ್ರಧಾನ ಕಾರ್ಯದರ್ಶಿ ಆಂಟೊನಿಯೊ ಗುಟೆರೆಸ್ ವಲ್ತಾರರಿಂದ ಶ್ಲಾಘನೆ
- ೩೮ನೇ ರಾಷ್ಟ್ರೀಯ ಕ್ರೀಡಾಕೂಟ; ಪುರುಷರ ಬಾಸ್ಕೆಟ್ ಬಾಲ್‌ನಲ್ಲಿ ಮಧ್ಯಪ್ರದೇಶಕ್ಕೆ ಚಿನ್ನ

<><><><>

ಸಂಸತ್ತಿನ ಉಭಯ ಸದನಗಳ ಜಂಟಿ ಅಧಿವೇಶನದಲ್ಲಿಂದು ರಾಷ್ಟ್ರಪತಿ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆಗೆ ಪ್ರಧಾನಿ ನರೇಂದ್ರ ಮೋದಿ ಉತ್ತರಿಸಲಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ  ಚಿಕೊಂಡಿರುವ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ರಾಷ್ಟ್ರಪತಿ ಭಾಷಣದ ವಂದನಾ ನಿರ್ಣಯದ ಮೇಲಿನ ಚರ್ಚೆ ನಿನ್ನೆ ಆರಂಭವಾಗಿದ್ದು, ಇಂದು ಸಂಜೆ ೫ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಉತ್ತರ ನೀಡಲಿದ್ದಾರೆ ಎಂದು ತಿಳಿಸಿದ್ದಾರೆ.

<><><><>

೨೦೩೧-೩೨ರ ವೇಳೆಗೆ ಸ್ಥಾಪಿತ ವಿದ್ಯುತ್ ಉತ್ಪಾದನಾ ಸಾಮರ್ಥ್ಯವನ್ನು ೮೭೪ ಗಿಗಾ ವ್ಯಾಟ್‌ಗೆ ಹೆಚ್ಚಿಸಲು ಯೋಜಿಸುತ್ತಿರುವುದಾಗಿ ಸರ್ಕಾರ ತಿಳಿಸಿದೆ. ರಾಜ್ಯಸಭೆಯಲ್ಲಿಂದು ಲಿಖಿತ ಉತ್ತರ ನೀಡಿದ ರಾಜ್ಯ ಸಚಿವ ಶ್ರೀಪಾದ್ ನಾಯಕ್, ಕಲ್ಲಿದ್ದಲು, ಲಿಗ್ನೈಟ್ ಮತ್ತು ಸೌರ, ಪವನ ಮತ್ತು ಜಲವಿದ್ಯುತ್ ಮುಂತಾದ ನವೀಕರಿಸಬಹುದಾದ ಮೂಲಗಳನ್ನು ಒಳಗೊಂಡಂತೆ ಸಾಂಪ್ರದಾಯಿಕ ಮೂಲಗಳಿಂದ ಉತ್ಪಾದಿಸುವ ವಿದ್ಯುತ್ ಇದರಲ್ಲಿ ಸೇರಿದೆ ಎಂದು ತಿಳಿಸಿದ್ದಾರೆ. ಪ್ರಸ್ತುತ ಸ್ಥಾಪಿತ ವಿದ್ಯುತ್ ಉತ್ಪಾದನಾ ಸಾಮರ್ಥ್ಯ ೪೭೨ ಗಿಗಾ ವ್ಯಾಟ್ ಆಗಿದ್ದು, ದೇಶದಲ್ಲಿ ಸಾಕಷ್ಟು ವಿದ್ಯುತ್ ಲಭ್ಯತೆ ಇದೆ. ಏಪ್ರಿಲ್ ೨೦೧೪ ರಿಂದ ಕೇಂದ್ರ ಸರ್ಕಾರ ೨೩೦ ಗಿಗಾ ವ್ಯಾಟ್ ಉತ್ಪಾದನಾ ಸಾಮರ್ಥ್ಯವನ್ನು ಹೆಚ್ಚಿಸುವ ಮೂಲಕ ವಿದ್ಯುತ್ ಕೊರತೆಯ ನಿರ್ಣಾಯಕ ಸಮಸ್ಯೆಯನ್ನು ಪರಿಹರಿಸಿದೆ ಎಂದು ಶ್ರೀಪಾದ್ ನಾಯಕ್ ಹೇಳಿದರು.

<><><><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ರೈತರ ಆದಾಯವನ್ನು ಹೆಚ್ಚಿಸಲು ಬದ್ಧವಾಗಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೋತ್ತರ ಕಲಾಪದ ವೇಳೆ ಪೂರಕ ಪ್ರಶ್ನೆಗಳಿಗೆ ಉತ್ತರಿಸಿ, ೨೦೧೯ ರಿಂದ ಉತ್ಪಾದನಾ ವೆಚ್ಚಕ್ಕಿಂತ ೫೦ ಪ್ರತಿಶತದಷ್ಟು ಲಾಭದೊಂದಿಗೆ ಕನಿಷ್ಠ ಬೆಂಬಲ ಬೆಲೆ ದರವನ್ನು ಸರ್ಕಾರ ನಿಗದಿಪಡಿಸಿದೆ ಎಂದು ಹೇಳಿದರು. ಭಾರತ ತೆಂಗಿನಕಾಯಿ ಉತ್ಪಾದನೆಯಲ್ಲಿ ವಿಶ್ವದಲ್ಲೇ ಅಗ್ರ ರಾಷ್ಟ್ರವಾಗಿ ಹೊರಹೊಮ್ಮಿದೆ. ಕೇಂದ್ರ ಸರ್ಕಾರ ತೆಂಗಿನಕಾಯಿ ಬಾಧಿಸುವ ರೋಗಗಳ ನಿಯಂತ್ರಣಕ್ಕೆ ಸಾಕಷ್ಟು ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ತಿಳಿಸಿದ್ದಾರೆ.

**ಧ್ವನಿ: ಶಿವರಾಜ್ ಸಿಂಗ್ ಚೌಹಾಣ್**

ಈ ನಡುವೆ, ಮಹಾಕುಂಭ ಮೇಳ ಘಟನೆ ಕುರಿತು ಪ್ರತಿಪಕ್ಷ ಸದಸ್ಯರು ಮಂಡಿಸಿದ ಕಲಾಪ ನಿಲುವಳಿ ಸೂಚನೆಗಳನ್ನು ಉಪಸಭಾಪತಿ ಹರಿವಂಶ್ ತಿರಸ್ಕರಿಸಿದರು.

<><><><>

ಈ ವರ್ಷದ ವಿಶ್ವಸಂಸ್ಥೆಯ ನಿಯಮಿತ ಬಜೆಟ್‌ಗೆ ಭಾರತ ೩೭.೬೪ ಮಿಲಿಯನ್ ಅಮೆರಿಕಾ ಡಾಲರ್ ಕೊಡುಗೆ ನೀಡಿದೆ. ಆ ಮೂಲಕ ತನ್ನ ಬಾಕಿ ಪಾವತಿಗಳನ್ನು ಸಕಾಲಿಕವಾಗಿ ಮತ್ತು ಪೂರ್ಣವಾಗಿ ಪಾವತಿಸಿದ್ದಕ್ಕಾಗಿ ಗೌರವಿಸಲಾದ ೩೫ ಸದಸ್ಯ ರಾಷ್ಟ್ರಗಳಲ್ಲಿ ತನ್ನ ಸ್ಥಾನವನ್ನು ಪಡೆದುಕೊಂಡಿದೆ. ಕಳೆದ ತಿಂಗಳು ೩೧ ರಂದು ಈ ಪಾವತಿ ಮಾಡಲಾಗಿದೆ. ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರ ವಕ್ತಾರ ಸ್ಟೀಫನ್ ಡುಜಾರಿಕ್ ಪತ್ರಿಕಾಗೋಷ್ಠಿಯಲ್ಲಿ ನಿನ್ನೆ ಭಾರತದ ಕೊಡುಗೆಯನ್ನು ಶ್ಲಾಘಿಸಿದರು. ವಿಶ್ವಸಂಸ್ಥೆಗೆ ತನ್ನ ಹಣಕಾಸು ಪಾವತಿಗಳನ್ನು ಸಮಯಕ್ಕೆ ಮತ್ತು ಪೂರ್ಣವಾಗಿ ಪೂರೈಸುವ ಖ್ಯಾತಿಯನ್ನು ಭಾರತ ನಿರಂತರವಾಗಿ ಪ್ರದರ್ಶಿಸಿದ್ದು, ವಿಶ್ವಸಂಸ್ಥೆಯ ತತ್ವಗಳು ಮತ್ತು ಜವಾಬ್ದಾರಿಗಳ ಕುರಿತು ಬದ್ಧತೆ ಹೊಂದಿದೆ. ಇಂದಿನಿಂದ ಈ ತಿಂಗಳ ೮ ರವರೆಗೆ ಭಾರತಕ್ಕೆ ಭೇಟಿ ನೀಡಲಿರುವ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಅಧ್ಯಕ್ಷ ಫಿಲೆಮನ್ ಯಾಂಗ್ ಅವರು ಇತ್ತೀಚಿನ ಸಂದರ್ಶನವೊಂದರಲ್ಲಿ ಭಾರತದ ವಿಶ್ವಾಸಾರ್ಹತೆಯನ್ನು ಶ್ಲಾಘಿಸಿದ್ದರು.

<><><><>

ಅಮೆರಿಕಾ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಕೆನಡಾ ಮತ್ತು ಮೆಕ್ಸಿಕೊ ದೇಶಗಳ ನಡುವೆ ವಿಧಿಸಿರುವುದು ಹೆಚ್ಚುವರಿ ಸುಂಕದ ಆದೇಶ ಒಂದು ತಿಂಗಳ ವಿಳಂಬವಾಗಿ ಜಾರಿಗೆ ಬರಲಿವೆ. ಕೆನಡಾ ಹಾಗೂ ಮೆಕ್ಸಿಕೊ ತಮ್ಮ ಗಡಿ ಭದ್ರತೆಯನ್ನು ಮತ್ತಷ್ಟು ಬಲಗೊಳಿಸಲು ಒಪ್ಪಿಕೊಂಡ ಬಳಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಈ ಆದೇಶ ಹೊರಡಿಸಿದ್ದಾರೆ. ಆದಾಗ್ಯೂ ಚೀನಾ ಮೇಲೆ ಹೊರೆಸಿರುವ ಸುಂಕ ಏರಿಕೆ ಇಂದಿನಿಂದ ಜಾರಿಗೆ ಬರಲಿದೆ. ಅಮೆರಿಕಾದ ಸುಂಕ ಏರಿಕೆಗೆ ಉತ್ತರವಾಗಿ ಚೀನಾದ ವಾಣಿಜ್ಯ ಸಚಿವಾಲಯ ಅಮೆರಿಕಾ ಉತ್ಪನ್ನಗಳ ನಡುವೆ ಪ್ರತಿಕಾರದ ಸುಂಕ ವಿಧಿಸುವುದಾಗಿ ಹೇಳಿದೆ. ಅಮೆರಿಕಾದಿಂದ ಆಮದು ಮಾಡಿಕೊಳ್ಳುವ ಕಲ್ಲಿದ್ದಲು ಮತ್ತು ದ್ರವ ನೈಸರ್ಗಿಕ ಅನಿಲದ ಮೇಲೆ ಶೇಕಡ ೧೫ ರಷ್ಟು ಸುಂಕ ವಿಧಿಸಲಾಗಿದೆ. ಹಾಗೆಯೇ, ಖಚ್ಚಾ ತೈಲ ಕೃಷಿ ಯಂತ್ರೋಪಕರಣ ಟ್ರಂಕ್ ಮತ್ತು ದೊಡ್ಡ ಇಂಜಿನ್ ಹೊಂದಿರುವ ಕಾರುಗಳ ಮೇಲೆ ಶೇಕಡ ೧೦ ಸುಂಕ ವಿಧಿಸಲಾಗಿದೆ. ಇದಕ್ಕೂ ಮುನ್ನ, ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊ ತಮ್ಮ ಗಡಿಯನ್ನು ಬಲಪಡಿಸಲು ೧.೩ ಶತಕೋಟಿ ಅಮೆರಿಕಾ ಡಾಲರ್ ಮೌಲ್ಯದ ಗಡಿ ಯೋಜನೆಯನ್ನು

ಜಾರಿಗೊಳಿಸುವುದಾಗಿ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಹಾಗೆಯೇ, ಮೆಕ್ಸಿಕೊ ಕೂಡ ೧೦ ಸಾವಿರ ಸೈನಿಕರನ್ನು ಅಮೆರಿಕಾ -ಮೆಕ್ಸಿಕೊ ಗಡಿಯಲ್ಲಿ ನಿಯೋಜಿಸುವುದಾಗಿ ಭರವಸೆ ನೀಡಿದೆ ಎಂದು ಅಧ್ಯಕ್ಷ ಟ್ರಂಪ್ ಹೇಳಿದ್ದಾರೆ.

<><><>

ನವದೆಹಲಿಯಲ್ಲಿಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಜಮ್ಮು ಮತ್ತು ಕಾಶ್ಮೀರದ ಭದ್ರತಾ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಸಭೆಯಲ್ಲಿ ಜಮ್ಮು-ಕಾಶ್ಮೀರದ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ, ಗೃಹ ಕಾರ್ಯದರ್ಶಿ ಗೋವಿಂದ ಮೋಹನ್, ಗುಪ್ತಚರ ದಳಗಳ ಮುಖ್ಯಸ್ಥರು ಮತ್ತಿತರ ಹಿರಿಯ ಅಧಿಕಾರಿಗಳು ಭಾಗವಹಿಸುವ ನಿರೀಕ್ಷೆ ಇದೆ.

<><><>

ನಾಳೆ ನಡೆಯಲಿರುವ ದೆಹಲಿಯ ವಿಧಾನಸಭಾ ಚುನಾವಣೆಗೆ ರಾಷ್ಟ್ರ ರಾಜಧಾನಿ ಸಕಲ ಸಿದ್ಧತೆ ಕೈಗೊಂಡಿದೆ. ೭೦ ಸದಸ್ಯ ಬಲದ ದೆಹಲಿ ವಿಧಾನಸಭೆಗೆ ನಾಳೆ ಮತದಾನ ನಡೆಯಲಿದ್ದು, ಬೆಳಗ್ಗೆ ೭ ಗಂಟೆಯಿಂದ ಸಂಜೆ ೬ ಗಂಟೆವರೆಗೆ ಮತದಾರರು ತಮ್ಮ ಹಕ್ಕು ಚಲಾಯಿಸಲು ಅವಕಾಶ ಕಲ್ಪಿಸಲಾಗಿದೆ.  ಒಂದು ಕೋಟಿ ೫೬ ಲಕ್ಷಕ್ಕೂ ಹೆಚ್ಚು ಮತದಾರರು ಕಣದಲ್ಲಿರುವ ೬೯೯ ಅಭ್ಯರ್ಥಿಗಳ ರಾಜಕೀಯ ಭವಿಷ್ಯ ನಿರ್ಧರಿಸಲಿದ್ದಾರೆ. ಈ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ನಿನ್ನೆ ಸಂಜೆ ತೆರೆ ಬಿದ್ದಿದೆ.  ಸುಗಮ ಚುನಾವಣೆಗಾಗಿ ಚುನಾವಣಾ ಆಯೋಗ ೧.೮ ಲಕ್ಷಕ್ಕೂ ಹೆಚ್ಚಿನ ಸಿಬ್ಬಂದಿಯನ್ನು ನಿಯೋಜಿಸಿದೆ. ಇಲ್ಲಿಯವರೆಗೆ ಸುಮಾರು ೨೨೦ ಕೋಟಿಗೂ ಅಧಿಕ ಮೌಲ್ಯದ ನಗದು, ಮದ್ಯ, ಮಾದಕ ದ್ರವ್ಯ, ವಿತರಿಸಲಾಗುತ್ತಿದ್ದ ಉಚಿತ ಸಾಮಗ್ರಿಗಳನ್ನು ವಶಪಡಿಸಿಕೊಳ್ಳಲಾಗಿದೆ.   ಚುನಾವಣೆಯಲ್ಲಿ ಕಾರ್ಯನಿರತ ಸಿಬ್ಬಂದಿಗೆ ಅನುಕೂಲವಾಗುವ ನಿಟ್ಟಿನಲ್ಲಿ ದೆಹಲಿ ಮೆಟ್ರೊ ತನ್ನ ಕಾರ್ಯಾಚರಣೆಯನ್ನು ಬೆಳಗ್ಗೆ ೪ ಗಂಟೆಗೆ ಆರಂಭಿಸಲಿದೆ. ಬೆಳಗ್ಗೆ ೬ ಗಂಟೆಯ ವೇಳೆಗೆ ಪ್ರತಿ ೩೦ ನಿಮಿಷಗಳಿಗೊಮ್ಮೆ ರೈಲು ಚಲಿಸಲಿದ್ದು, ಬಳಿಕ ಎಂದಿನ ವೇಳಾಪಟ್ಟಿಯನ್ನು ಅನುಸರಿಸಲಾಗುವುದು.

<><><><>

ಜಾಗತಿಕವಾಗಿ ಭಯೋತ್ಪಾದನೆಯನ್ನು ಅನುಕೂಲಕ್ಕೆ ತಕ್ಕಂತೆ ಕಡಿಗಣಿಸಲಾಗುತ್ತಿದೆ ಎಂದು ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ನವದೆಹಲಿಯಲ್ಲಿಂದು ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಜಗತ್ತು ಪ್ರಸ್ತುತ ಎರಡು ಪ್ರಮುಖ ಸಂಘರ್ಷಗಳಿಗೆ ಸಾಕ್ಷಿಯಾಗುತ್ತಿದೆ, ಇವುಗಳನ್ನು ಹೆಚ್ಚಾಗಿ ತತ್ವದ ವಿಷಯಗಳಾಗಿ ಪ್ರಸ್ತುತಪಡಿಸಲಾಗುತ್ತಿದೆ ಮತ್ತು ಅನುಕೂಲಕರವಾದಾಗ ಭಯೋತ್ಪಾದನೆಯನ್ನು ಕಡೆಗಣಿಸಲಾಗಿದೆ ಎಂದು ಹೇಳಿದರು. ಏಷ್ಯಾದಲ್ಲಿ, ಅಂತರರಾಷ್ಟ್ರೀಯ ಕಾನೂನನ್ನು ಗಮನಾರ್ಹವಾಗಿ, ನಿರ್ಲಕ್ಷಿಸಲಾಗಿದೆ ಎಂದು ಅವರು ತಿಳಿಸಿದರು.

<><><><>

ಪ್ರಯಾಗ್‌ರಾಜ್ ಕುಂಭ ಮೇಳಕ್ಕಿಂದು ಭೂತಾನ್ ದೊರೆ ಜಿಗ್ಮೆ ಕೇಸರ್ ನಾಮ್‌ಗೇಲ್ ವಾಂಗ್ ಚುಕ್ ಭೇಟಿ ನೀಡಿ, ಅಮೃತ ಸ್ನಾನ ಕೈಗೊಂಡರು. ಈ ವೇಳೆ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕೂಡ ಪವಿತ್ರ ಸ್ನಾನ ಕೈಗೊಂಡರು. ಬಳಿಕ ಭೂತಾನ್ ದೊರೆ ಅಕ್ಷಯವತ್ ಮತ್ತು ಬಡೇ ಹನುಮಾನ್ ದೇವಾಲಯಕ್ಕೆ ಭೇಟಿ ನೀಡಲಿದ್ದಾರೆ. ನಿನ್ನೆ ಅವರು, ಉತ್ತರ ಪ್ರದೇಶದ ಲಖನೌಗೆ ಆಗಮಿಸಿದರು.

<><><><>

ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಇಸ್ರೇಲ್ ಬೆಂಜಮಿನ್ ನೆತನ್ಯಾಹು ಇಂದು ಅಮೆರಿಕದ ವಾಷಿಂಗ್ಟನ್‌ನಲ್ಲಿ ಭೇಟಿಯಾಗಲಿದ್ದಾರೆ. ಒತ್ತೆಯಾಳುಗಳನ್ನು ಬಿಡುಗಡೆ ಮಾಡಲು ಅವಕಾಶ ಮಾಡಿಕೊಟ್ಟಿರುವ ಇಸ್ರೇಲ್ ಮತ್ತು ಹಮಾಸ್ ನಡುವೆ ಕದನ ವಿರಾಮವನ್ನು ವಿಸ್ತರಿಸುವ ಕುರಿತು ಮಾತುಕತೆಗಳು ಕೇಂದ್ರೀಕರಿಸಿವೆ.

ಇಸ್ರೇಲ್-ಸೌದಿ ಅರೇಬಿಯಾ ಸಂಬಂಧಗಳು ಮತ್ತು ಇರಾನ್‌ನ ಪರಮಾಣು ಯೋಜನೆಯ ಬಗ್ಗೆಯೂ ಉಭಯ ನಾಯಕರು ಚರ್ಚಿಸಲಿದ್ದಾರೆ. ನವೆಂಬರ್‌ನಲ್ಲಿ ಅಂತರರಾಷ್ಟ್ರೀಯ ಅಪರಾಧ

ನ್ಯಾಯಾಲಯ ನೇತನ್ಯಾಹು, ಅವರ ಮಾಜಿ ರಕ್ಷಣಾ ಸಚಿವರು ಮತ್ತು ಹಮಾಸ್‌ನ ಮಿಲಿಟರಿ ಮುಖ್ಯಸ್ಥರ ವಿರುದ್ಧ ಬಂಧನ ವಾರಂಟ್‌ಗಳನ್ನು ಹೊರಡಿಸಿದ ನಂತರ ನೆತನ್ಯಾಹು ಇಸ್ರೇಲ್‌ನ ಹೊರಗೆ ಕೈಗೊಳ್ಳಯತ್ತಿರುವ ಮೊದಲ ಪ್ರಯಾಣ ಇದಾಗಿದೆ. ಈ ನಡುವೆ ಕದನ ವಿರಾಮದ ಬಗ್ಗೆ ನೆತನ್ಯಾಹು ಸರ್ಕಾರದಲ್ಲೇ ಭಿನ್ನಾಭಿಪ್ರಾಯಗಳಿವೆ.

<><><><>

ಡೆಹ್ರಾಡೂನ್‌ನಲ್ಲಿ ನಡೆಯುತ್ತಿರುವ ೩೮ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಇಂದು ನಡೆದ ಪುರುಷರ ವಿಭಾಗದ ಬಾಸ್ಕೆಟ್ ಬಾಲ್ ಫೈನಲ್ ಪಂದ್ಯದಲ್ಲಿ ಕೇರಳ ವಿರುದ್ಧ ಮಧ್ಯಪ್ರದೇಶ ತಂಡ ೨೨-೨೦ ಅಂಕಗಳ ಅಂತರದಲ್ಲಿ ಗೆಲುವು ಸಾಧಿಸಿ, ಚಿನ್ನದ ಪದಕ ತನ್ನದಾಗಿಸಿಕೊಂಡಿದೆ. ಮಹಿಳೆಯರ ವಿಭಾಗದ ಫೈನಲ್ ಪಂದ್ಯದಲ್ಲಿ ತೆಲಂಗಾಣ ತಂಡ ಕೇರಳ ತಂಡದ ವಿರುದ್ಧ ೨೧-೧೧ ಅಂಕಗಳ ಅಂತರದಲ್ಲಿ ಭರ್ಜರಿ ಜಯ ದಾಖಲಿಸಿದೆ. ಆ ಮೂಲಕ ತೆಲಂಗಾಣ ಚಿನ್ನದ ಪದಕ ಗೆದ್ದರೆ, ಪುರುಷರ ಹಾಗೂ ಮಹಿಳಾ ವಿಭಾಗದಲ್ಲಿ ಕೇರಳ ತಂಡ ಬೆಳ್ಳಿ ಪದಕಕ್ಕೆ ತೃಪ್ತಿಪಟ್ಟಿಕೊಂಡಿದ್ದಾರೆ.

<><><><>

ಕಳೆದ ತಿಂಗಳು ೩೧ ರ ವೇಳೆಗೆ ಚಲಾವಣೆಯಲ್ಲಿರುವ ೨ ಸಾವಿರ ರೂಪಾಯಿ ನೋಟುಗಳ ಒಟ್ಟು ಮೌಲ್ಯ ೬ ಸಾವಿರದ ೫೭೭ ಕೋಟಿ ರೂಪಾಯಿಗಳಿಗೆ ಇಳಿದಿದೆ ಎಂದು ಭಾರತೀಯ ರಿಸರ್ವ್ ಬ್ಯಾಂಕ್ ತಿಳಿಸಿದೆ. ಮೇ ೨೦೨೩ರಲ್ಲಿ ಚಲಾವಣೆಯಲ್ಲಿದ್ದ ೩.೫೬ ಲಕ್ಷ ಕೋಟಿ ಮೌಲ್ಯದ ಕರೆನ್ಸಿ ನೋಟುಗಳಲ್ಲಿ ಶೇಕಡ ೯೮.೧೫ ರಷ್ಟು ಹಿಂತೆಗೆದುಕೊಳ್ಳಲಾಗಿದೆ ಎಂದು ಆರ್‌ಬಿಐ ಸ್ಪಷ್ಟಪಡಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>